# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 66 (503) |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ), |
| ಉತ್ತರಿಸಬೇಕಾದ ದಿನಾಂಕ | 16/09/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಹಾವೇರಿ-ಧಾರವಾಡ-ಹುಬ್ಬಳ್ಳಿ-ಗದಗ ಜಿಲ್ಲೆಯಲ್ಲಿನ ಕಾರ್ಮಿಕ ಇಲಾಖೆಯು ಎಷ್ಟು ಕಾರ್ಮಿಕರನ್ನು ನೋಂದಣಿ ಮಾಡಿಕೊಂಡು ಅವರಿಗೆ ಕಾರ್ಮಿಕ ಕಾರ್ಡ್‌ಗಳನ್ನು ವಿತರಿಸಿದೆ; (ಜಿಲ್ಲಾವರು ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಫಲಾನುಭವಿಗಳಾಗಿ ನೋಂದಾಯಿತರಾಗಿರುವ ಕಾರ್ಮಿಕರ ವಿವರಗಳು ಈ ಕೆಳಗಿನಂತಿವೆ:<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br>ಈ ಮಂಡಳಿಯ ವತಿಯಿಂದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿಸಲಾಗುತ್ತಿದ್ದು, ಹಾವೇರಿ-ಧಾರವಾಡ-ಹುಬ್ಬಳ್ಳಿ-ಗದಗ ಜಿಲ್ಲೆಯಲ್ಲಿ ನೋಂದಣಿಯಾದ ಕಾರ್ಮಿಕರ ಜಿಲ್ಲಾವಾರು ವಿವರ ಈ ಕೆಳಕಂಡಂತಿದೆ:<br><br>ಕ್ರ ಸಂ / ಜಿಲ್ಲೆ / ನೋಂದಣಿಯಾದ ಫಲಾನುಭವಿಗಳ ಸಂಖ್ಯೆ<br>1 / ಹಾವೇರಿ / 89,854<br>2 / ಧಾರವಾಡ-ಹುಬ್ಬಳ್ಳಿ / 2,10,573<br>3 / ಗದಗ / 1,41,890<br>ಒಟ್ಟು / 4,42,317<br><br>ನೋಂದಾಯಿತ ಎಲ್ಲಾ ಫಲಾನುಭವಿಗಳಿಗೆ ಮಂಡಳಿಯ ವತಿಯಿಂದ ಗುರುತಿನ ಚೀಟಿಯನ್ನು ವಿತರಿಸಲಾಗಿದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**<br>ಮಂಡಳಿಯು ರಾಜ್ಯ ಮತ್ತು ಕೇಂದ್ರ ಸರ್ಕಾರದ ಈ ಕೆಳಕಂಡ ಯೋಜನೆಗಳಡಿ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗುತ್ತಿದ್ದು ವಿವರ ಈ ಕೆಳಗಿನಂತಿದೆ: |

<table>
<tr>
<td></td>
<td></td>
<td>
1. ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:<br>
ಈ ಯೋಜನೆಯಡಿ 11 ವರ್ಗಗಳ ಅಸಂಘಟಿತ ಕಾರ್ಮಿಕರಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಗುರುತಿನ ಚೀಟಿಯನ್ನು ವಿತರಿಸಲಾಗುತ್ತಿದ್ದು, ಹಾವೇರಿ-ಧಾರವಾಡ-ಹುಬ್ಬಳ್ಳಿ-ಗದಗ ಜಿಲ್ಲೆಯಲ್ಲಿ ಒಟ್ಟು 18,004 ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿದೆ.<br><br>
2. ಇ-ಶ್ರಮ್ ಕಾರ್ಯಕ್ರಮ:<br>
ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಯಲವು ಅಸಂಘಟಿತ ಕಾರ್ಮಿಕರ ದತ್ತಾಂಶವನ್ನು ಸಂಗ್ರಹಿಸುವ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ 379 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿಸಲಾಗುತ್ತಿದ್ದು, ಹಾವೇರಿ-ಧಾರವಾಡ-ಹುಬ್ಬಳ್ಳಿ-ಗದಗ ಜಿಲ್ಲೆಗಳಲ್ಲಿ ದಿನಾಂಕ:11-09-2022ರ ಅಂತ್ಯಕ್ಕೆ 6,71,234 ಅಸಂಘಟಿತ ಕಾರ್ಮಿಕರು ನೋಂದಣಿಯಾಗಿರುತ್ತಾರೆ.<br><br>
ಮೇಲ್ಕಂಡ ಯೋಜನೆ/ಕಾರ್ಯಕ್ರಮದಡಿ ನೋಂದಣಿಯಾದ ಅಸಂಘಟಿತ ಕಾರ್ಮಿಕರ ಜಿಲ್ಲಾವಾರು ವಿವರ ಈ ಕೆಳಗಿನಂತಿದೆ
<table>
<tr><td>ಕ್ರ.ಸಂ</td><td>ಜಿಲ್ಲೆ</td><td>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ</td><td>ಇ-ಶ್ರಮ್</td></tr>
<tr><td>01</td><td>ಹಾವೇರಿ</td><td>6121</td><td>282091</td></tr>
<tr><td>02</td><td>ಧಾರವಾಡ</td><td>6639</td><td>242398</td></tr>
<tr><td>03</td><td>ಗದಗ</td><td>5244</td><td>146745</td></tr>
<tr><td colspan="2">ಒಟ್ಟು</td><td>18,004</td><td>6,71,234</td></tr>
</table>
</td>
</tr>
<tr>
<td>(ಆ)</td>
<td>ಎಷ್ಟು ಕಟ್ಟಡ ಕಾರ್ಮಿಕರು ಬೆಂಗಳೂರು ಮಹಾನಗರದಲ್ಲಿ ಕಟ್ಟಡ ಕಾಮಗಾರಿಗಳನ್ನು ನಿರ್ವಹಿಸುತ್ತಿದ್ದಾರೆ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)</td>
<td>
<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ;</u><br>
ಬೆಂಗಳೂರು ಮಹಾನಗರ ಜಿಲ್ಲೆಯಲ್ಲಿ 3,18,627 ಕಾರ್ಮಿಕರು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ನೋಂದಣಿಯಾಗಿರುತ್ತಾರೆ.<br>
ಆದರೆ ಬೆಂಗಳೂರು ಮಹಾನಗರದಲ್ಲಿ ಕಟ್ಟಡ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆಯನ್ನು ಅಂದಾಜಿಸಲು ಮಂಡಳಿಯ ವತಿಯಿಂದ ಸಮೀಕ್ಷೆ ಕೈಗೊಂಡಿರುವುದಿಲ್ಲ ಹಾಗೂ ಬೆಂಗಳೂರು ನಗರದಲ್ಲಿ ಹೊರ ಜಿಲ್ಲೆಯಿಂದ ಬಂದು ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರ ವಿವರ ಲಭ್ಯವಿರುವುದಿಲ್ಲ.
</td>
</tr>
</table>

| | | |
|---|---|---|
| (ಇ) | ಕಾರ್ಮಿಕ ಇಲಾಖಾ ಅಡಿಯಲ್ಲಿ ನೋಂದಣಿ ಮಾಡಿಕೊಂಡ ಎಷ್ಟು ಕಾರ್ಮಿಕರಿಗೆ ಇ.ಎಸ್.ಐ. ಸೌಲಭ್ಯವನ್ನು ಒದಗಿಸಲಾಗಿದೆ ಹಾಗೂ ಅದಕ್ಕೆ ಇರುವ ಮಾನದಂಡಗಳೇನು; | ಕಾರ್ಮಿಕ ಇಲಾಖೆಯಲ್ಲಿ ನೋಂದಣಿ ಮಾಡಿಕೊಂಡ ಕಾರ್ಮಿಕರಿಗೆ ಇ.ಎಸ್.ಐ ಸೌಲಭ್ಯವು ಅನ್ವಯಿಸುವುದಿಲ್ಲ. |
| (ಈ) | ಕಾರ್ಮಿಕ ಕಾರ್ಡ್‌ನ್ನು ಹೊಂದಿರುವ ಕಾರ್ಮಿಕರಿಗೆ ಆರೋಗ್ಯ ಇಲಾಖೆಯ ವತಿಯಿಂದ ಒದಗಿಸಲಾಗುತ್ತಿರುವ ಸೌಲಭ್ಯಗಳೇನು; | ಕಾರ್ಮಿಕ ಕಾರ್ಡ್‌ನ್ನು ಹೊಂದಿರುವ ಕಾರ್ಮಿಕರಿಗೆ ಆರೋಗ್ಯ ಇಲಾಖೆಯ ವತಿಯಿಂದ ಯಾವುದೇ ಸೌಲಭ್ಯವನ್ನು ಒದಗಿಸಲಾಗುವುದಿಲ್ಲ ಆದರೆ ಕಾರ್ಮಿಕ ಇಲಾಖೆ ವತಿಯಿಂದ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>1. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ)**: ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/- ರಿಂದರೂ.20,000/-ವರೆಗೆ.**<br>2. **ಅಪಘಾತ ಪರಿಹಾರ**: ಮರಣ ಹೊಂದಿದ್ದಲ್ಲಿ **ರೂ.5,00,000/-** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/- ಮತ್ತು** ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**<br>3. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ |
| (ಉ) | ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಇಲಾಖೆಯ ವತಿಯಿಂದ ಯಾವ ಯಾವ ತರಗತಿಯವರೆಗೆ ವಿದ್ಯಾರ್ಥಿವೇತನ ನೀಡಲಾಗುತ್ತಿದೆ; ಕಳೆದ 5 ವರ್ಷದಿಂದ ಎಷ್ಟು ವಿದ್ಯಾರ್ಥಿ ವೇತನವನ್ನು ಬಿಡುಗಡೆ ಮಾಡಲಾಗಿದೆ? | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br>ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ಈ ಕೆಳಕಂಡ ವಿದ್ಯಾಭ್ಯಾಸಕ್ಕಾಗಿ ಶೈಕ್ಷಣಿಕ ಸಹಾಯಧನ ಸೌಲಭ್ಯದಡಿ ವಿತರಿಸುತ್ತಿರುವ ಸೌಲಭ್ಯದ ವಿವರವನ್ನು **ಅನುಬಂಧದಲ್ಲಿ** ಸಲ್ಲಿಸಿದೆ.<br><br>ಕಳೆದ 5 ವರ್ಷದಲ್ಲಿ ಮಂಡಳಿಯ ವತಿಯಿಂದ ಶೈಕ್ಷಣಿಕ ಸಹಾಯಧನ ಸೌಲಭ್ಯದಡಿ 7,47,719 ಫಲಾನುಭವಿಗಳಿಗೆ ರೂ. 707,58,20,452/- ಗಳಷ್ಟು ಸಹಾಯಧನ ವಿತರಿಸಲಾಗಿದೆ. ವರ್ಷವಾರು ವಿವರ ಈ ಕೆಳಕಂಡಂತಿದೆ; |

| ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಕಳೆದ 5 ವರ್ಷದಲ್ಲಿ ಶೈಕ್ಷಣಿಕ ಸಹಾಯಧನ ವಿತರಿಸಿದ ಮಾಹಿತಿ | | | |
|---|---|---|---|
| ಕ್ರಮ ಸಂಖ್ಯೆ | ವರ್ಷವಾರು | ಶೈಕ್ಷಣಿಕ ಸಹಾಯಧನ | |
| | | ಸಂಖ್ಯೆ | ಮೊತ್ತ (ರೂ.ಗಳಲ್ಲಿ) |
| 1 | 2017–2018 | 85080 | 483780703 |
| 2 | 2018–2019 | 106079 | 613319245 |
| 3 | 2019–2020 | 102284 | 501674344 |
| 4 | 2020–2021 | 115538 | 869366430 |
| 5 | 2021–2022 | 338738 | 4607679730 |
| ಒಟ್ಟು ಮೊತ್ತ | | **7,47,719** | **707,58,20,452** |

**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>**

ಈ ಮಂಡಳಿಯು ಜಾರಿಗೊಳಿಸುತ್ತಿರುವ ರಾಜ್ಯ ಸರ್ಕಾರದ ಯೋಜನೆಯಾದ "ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"ಯಡಿ 2018–19ನೇ ಸಾಲಿನಿಂದ ಅಪಘಾತದಿಂದ ಮರಣ/ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ 12ನೇ ತರಗತಿಯ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/–ಗಳ ಶೈಕ್ಷಣಿಕ ಸಹಾಯಧನವನ್ನು ಒದಗಿಸಲಾಗುತ್ತಿದೆ.

ಯೋಜನೆ ಪ್ರಾರಂಭವಾದ 2018–19 ರಿಂದ 2021–22ರವರೆಗೆ ವಿತರಿಸಿದ ವಿದ್ಯಾರ್ಥಿ ವೇತನದ ವರ್ಷವಾರು ವಿವರ ಈ ಕೆಳಕಂಡಂತಿದೆ:

| ಕ್ರ.ಸಂ. | ವರ್ಷ | ವಿದ್ಯಾರ್ಥಿಗಳ ಸಂಖ್ಯೆ | ಮೊತ್ತ (ಲಕ್ಷಗಳಲ್ಲಿ) |
|---|---|---|---|
| 01 | 2018–19 | 149 | ರೂ.14.90 |
| 02 | 2019–20 | 184 | ರೂ.18.40 |
| 03 | 2020–21 | 206 | ರೂ.20.60 |
| 04 | 2021–22 | 253 | ರೂ.25.30 |

**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ</u>**

ಕರ್ನಾಟಕ ಕಾರ್ಮಿಕ ಮಂಡಳಿಯಲ್ಲಿ 20:40 ರ ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಪ್ರತಿ ಕಾರ್ಮಿಕರಿಂದ ರೂ 20/– ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40/– ರಂತೆ ವಂತಿಕೆಯನ್ನು ವರ್ಷಕ್ಕೆ ಒಂದು ಬಾರಿ ವಂತಿಕೆ ಪಾವತಿಸುವ ಸಂಘಟಿತ ಕಾರ್ಮಿಕರಿಗೆ ವಿವಿಧ ಕಲ್ಯಾಣ ಯೋಜನೆಗಳಡಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಯೋಜನೆಯಡಿ ಸಂಘಟಿತ ಕಾರ್ಮಿಕರ ಮಕ್ಕಳಿಗೆ ಪ್ರೌಢ ಶಾಲೆ, ಪದವಿ ಪೂರ್ವ, ಪದವಿ, ಮತ್ತು ಸ್ನಾತಕೋತ್ತರ ಪದವಿ ಹಾಗೂ ಬಿ.ಇ. & ಎಂ.ಬಿ.ಬಿ.ಎಸ್. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಧನ ಸಹಾಯ ನೀಡಲಾಗುವುದು.

ಕಳೆದ 5 ವರ್ಷಗಳಿಂದ ಬಿಡುಗಡೆ ಮಾಡಲಾಗಿರುವ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಮೊತ್ತದ ವಿವರ ಈ ಕೆಳಕಂಡಂತಿವೆ.

| ವರ್ಷ | ಫಲಾನುಭವಿಗಳ ಸಂಖ್ಯೆ | ಮೊತ್ತ |
|---|---|---|
| 2017–18 | 17414 | 7,11,40,200 |
| 2018–19 | 21127 | 8,57,34,000 |
| 2019–20 | 26257 | 10,51,98,000 |
| 2020–21 | 13729 | 6,01,48,000 |
| 2021–22 | 10745 | 4,51,76,000 |

**ಕಾಇ 498 ಎಲ್ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

# ಅನುಬಂಧ

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 503

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ) ಸೌಲಭ್ಯದಡಿ ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ನೀಡುತ್ತಿರುವ ಸಹಾಯಧನ:**

| ಕ್ರಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | **ಪದವಿ ಪೂರ್ವ** | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ 2 ವರ್ಷಅವಧಿಗೆ ಒಳಪಟ್ಟು |
| **ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ** | | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | ಸದರಿ ಕೋರ್ಸ್‌ನ ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ.60,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು) |

| | | |
|---|---|---|
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷರೂ. 25,000 (ಯೂಜಿಸಿಯ ಜೂನಿಯರ್‌ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |